All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

21.08.2025 19.35 P.M.

<><><><>

ಮುಖ್ಯಾಂಶಗಳು

- ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ೧೨ ಮಸೂದೆಗಳಿಗೆ ಅಂಗೀಕಾರ ; ಉಭಯ ಸದನಗಳ ಕಲಾಪ ಅನಿರ್ಧಿಷ್ಟಾವಧಿ ಮುಂದೂಡಿಕೆ
- ನಾಳೆ ಬಿಹಾರದ ಗಯಾದಲ್ಲಿ ೧೩ ಸಾವಿರ ಕೋಟಿ ರೂಪಾಯಿ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ಶಿಲಾನ್ಯಾಸ ಮತ್ತು ಲೋಕಾರ್ಪಣೆ
- ಎರಡನೇ ಮಹಾಯುದ್ಧದ ನಂತರ ಭಾರತ-ರಷ್ಯಾ ಸಂಬಂಧ ಸ್ಥಿರ - ಸಚಿವ ಡಾ. ಎಸ್. ಜೈಶಂಕರ್
- ಮಾನವ ಸಹಿತ ಬಾಹ್ಯಾಕಾಶ ಯಾನ : ಡಿಸೆಂಬರ್‌ನಲ್ಲಿ ಮೊದಲ ಪರೀಕ್ಷಾರ್ಥ ಹಾರಾಟ - ಇಸ್ರೋ

<><><><>

ಸಂಸತ್ತಿನ ಮಳೆಗಾಲದ ಅಧಿವೇಶನವು ಇಂದು ಮುಕ್ತಾಯಗೊಂಡಿದ್ದು, ಲೋಕಸಭೆ ಮತ್ತು ರಾಜ್ಯಸಭೆಯನ್ನು ಇಂದು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿದೆ. ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರು ಇಂದು ಸದನಕ್ಕೆ ಮಾಹಿತಿ ನೀಡಿ, ಅಧಿವೇಶನದಲ್ಲಿ ೧೪ ಸರ್ಕಾರಿ ಮಸೂದೆಗಳನ್ನು ಮಂಡಿಸಲಾಯಿತು ಮತ್ತು ಒಟ್ಟು ೧೨ ಮಸೂದೆಗಳನ್ನು ಅಂಗೀಕರಿಸಲಾಯಿತು ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿಯವರ ಉತ್ತರದೊಂದಿಗೆ ಆಪರೇಷನ್ ಸಿಂಧೂರ್ ಕುರಿತು ಎರಡು ದಿನಗಳ ವಿಶೇಷ ಚರ್ಚೆ ನಡೆಯಿತು. ಭಾರತದ ಬಾಹ್ಯಾಕಾಶ ಕಾರ್ಯಕ್ರಮದ ಸಾಧನೆಗಳ ಕುರಿತು ವಿಶೇಷ ಚರ್ಚೆಯನ್ನು ಪ್ರಾರಂಭಿಸಲಾಯಿತು. ಈ ಅಧಿವೇಶನದ ಕಾರ್ಯಸೂಚಿಯಲ್ಲಿ ಒಟ್ಟು ೪೧೯ ನಕ್ಷತ್ರ ಹಾಕಿದ ಪ್ರಶ್ನೆಗಳನ್ನು ಸೇರಿಸಲಾಗಿದೆ. ಆದರೆ ನಿರಂತರ ಪೂರ್ವ ಯೋಜಿತ ಅಡಚಣೆಗಳಿಂದಾಗಿ, ಮೌಖಿಕ ಉತ್ತರಕ್ಕಾಗಿ ಕೇವಲ ೫೫ ಪ್ರಶ್ನೆಗಳನ್ನು ಮಾತ್ರ ತೆಗೆದುಕೊಳ್ಳಲಾಗಿದೆ ಎಂದು ಅವರು ಹೇಳಿದರು. ಅಡಚಣೆಗಳಿಂದಾಗಿ ಸಮಯ ನಷ್ಟವಾದ ಬಗ್ಗೆ ಬಿರ್ಲಾ ಅಸಮಾಧಾನ ವ್ಯಕ್ತಪಡಿಸಿದರು. ಅನಿರ್ದಿಷ್ಟಾವಧಿಗೆ ಮುಂದೂಡುವ ಮೊದಲು ರಾಜ್ಯಸಭೆಯಲ್ಲಿಯೂ ಇದೇ ರೀತಿಯ ಸನ್ನಿವೇಶವಿತ್ತು. ಇಂದು, ಮೇಲ್ಮನೆಯಲ್ಲಿ, ಸಂವಿಧಾನ-೧೩೦ನೇ ತಿದ್ದುಪಡಿ ಮಸೂದೆ, ಕೇಂದ್ರಾಡಳಿತ ಪ್ರದೇಶಗಳ ಸರ್ಕಾರ-ತಿದ್ದುಪಡಿ ಮಸೂದೆ ಮತ್ತು ಜಮ್ಮು ಮತ್ತು ಕಾಶ್ಮೀರ ಮರುಸಂಘಟನೆ-ತಿದ್ದುಪಡಿ ಮಸೂದೆಯನ್ನು ಇಂದು ಹೆಚ್ಚಿನ ಪರಿಶೀಲನೆಗಾಗಿ ಸಂಸತ್ತಿನ ಜಂಟಿ ಸಮಿತಿಗೆ ನೀಡಲಾಯಿತು.

<><><>

ಪ್ರಧಾನಿ ನರೇಂದ್ರ ಮೋದಿ ನಾಳೆ ಬಿಹಾರದ ಗಯಾದಲ್ಲಿ ಸುಮಾರು ೧೨ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಿಲಾನ್ಯಾಸ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಪಶ್ಚಿಮ ಬಂಗಾಳಕ್ಕೆ ಭೇಟಿ ವೇಳೆ ಅವರು, ೫ ಸಾವಿರದ ೨೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಭೂಮಿಪೂಜೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಕೋಲ್ಕತ್ತಾದಲ್ಲಿ ಹೊಸದಾಗಿ ನಿರ್ಮಿಸಲಾದ ವಿಭಾಗಗಳಲ್ಲಿ ಮೆಟ್ರೋ ರೈಲು ಸೇವೆಗಳಿಗೆ ಅವರು ಚಾಲನೆ ನೀಡಲಿದ್ದು, ೧ ಸಾವಿರದ ೨೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ೭.೨ ಕಿಲೋಮೀಟರ್ ಉದ್ದದ ಆರು ಪಥಗಳ ಕೋನಾ ಎಕ್ಸ್‌ಪ್ರೆಸ್‌ವೇಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಈ ಉಪಕ್ರಮವು ಹೌರಾ, ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳು ಮತ್ತು ಕೋಲ್ಕತ್ತಾ ನಡುವಿನ ಸಂಪರ್ಕವನ್ನು ಹೆಚ್ಚಿಸುತ್ತದೆ.

<><><>

ಎರಡನೇ ಮಹಾಯುದ್ಧದ ನಂತರ ಭಾರತ ಮತ್ತು ರಷ್ಯಾ ನಡುವಿನ ಸಂಬಂಧಗಳು ವಿಶ್ವದ ಪ್ರಮುಖ ಸಂಬಂಧಗಳಲ್ಲಿ ಸ್ಥಿರವಾಗಿವೆ. ಇಂದು ಮಾಸ್ಕೋದಲ್ಲಿ ನಡೆದ ಸಭೆಯಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದರು. ರಷ್ಯಾದ ವಿದೇಶಾಂಗ ಸಚಿವ ಸೆರ್ಗೆ ಲಾವ್ರೊವ್ ಅವರ ಜೊತೆಗೆ ಭಾರತ-ರಷ್ಯಾ ದ್ವಿಪಕ್ಷೀಯ ಸಂಬಂಧಗಳ ಕುರಿತು ಮಾತುಕತೆಯ ನಂತರ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಅವರು, ಭೌಗೋಳಿಕ ರಾಜಕೀಯ ಒಮ್ಮತ, ನಾಯಕತ್ವ ಸಂಪರ್ಕಗಳು ಮತ್ತು ಜನಪ್ರಿಯ ಭಾವನೆಗಳು ಭಾರತ-ರಷ್ಯಾ ಪಾಲುದಾರಿಕೆಯ ಪ್ರಮುಖ ಚಾಲಕ ಶಕ್ತಿಗಳಾಗಿವೆ ಎಂದು ಹೇಳಿದರು. ರಷ್ಯಾಕ್ಕೆ ಭಾರತದ ರಫ್ತುಗಳನ್ನು ಹೆಚ್ಚಿಸುವುದು ಸೇರಿದಂತೆ ಸಮತೋಲಿತ ಮತ್ತು ಸುಸ್ಥಿರ ರೀತಿಯಲ್ಲಿ ದ್ವಿಪಕ್ಷೀಯ ವ್ಯಾಪಾರವನ್ನು ವಿಸ್ತರಿಸುವ ಹಂಚಿಕೆಯ ಮಹತ್ವಾಕಾಂಕ್ಷೆಯನ್ನು ಇಬ್ಬರೂ ಸಚಿವರು ಪುನರುಚ್ಚರಿಸಿದರು. ಇದಕ್ಕೆ ಸುಂಕ ರಹಿತ ಅಡೆತಡೆಗಳು ಮತ್ತು ನಿಯಂತ್ರಕ ಅಡೆತಡೆಗಳನ್ನು ತ್ವರಿತವಾಗಿ ಪರಿಹರಿಸುವ ಅಗತ್ಯವಿದೆ ಎಂದು ಡಾ. ಜೈಶಂಕರ್ ಒತ್ತಿ ಹೇಳಿದರು. ಔಷಧಗಳು, ಕೃಷಿ ಮತ್ತು ಜವಳಿ ಮುಂತಾದ ಕ್ಷೇತ್ರಗಳಲ್ಲಿ ರಷ್ಯಾಕ್ಕೆ ಭಾರತೀಯ ರಫ್ತುಗಳನ್ನು ಹೆಚ್ಚಿಸುವುದು ಪ್ರಸ್ತುತ ಅಸಮತೋಲನವನ್ನು ಸರಿಪಡಿಸಲು ಸಹಾಯ ಮಾಡುತ್ತದೆ ಎಂದು ಅವರು ಹೇಳಿದರು. ರಸಗೊಬ್ಬರಗಳ ದೀರ್ಘಾವಧಿಯ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಕ್ರಮಗಳನ್ನು ಸಹ ತೆಗೆದುಕೊಳ್ಳಲಾಗಿದೆ. ಭಾರತೀಯ ಕೌಶಲ್ಯಪೂರ್ಣ ಕೆಲಸಗಾರರು, ವಿಶೇಷವಾಗಿ ಐಟಿ, ನಿರ್ಮಾಣ ಮತ್ತು ಎಂಜಿನಿಯರಿಂಗ್‌ನಲ್ಲಿ ರಷ್ಯಾದಲ್ಲಿನ ಕಾರ್ಮಿಕ ಅಗತ್ಯಗಳನ್ನು ಪೂರೈಸಬಹುದು ಮತ್ತು ಸಹಯೋಗವನ್ನು ಹೆಚ್ಚಿಸಬಹುದು ಎಂದು ಡಾ. ಜೈಶಂಕರ್ ಹೇಳಿದರು.

<><><>

ಭಾರತದ ಮೊದಲ ಮಾನವಸಹಿತ ಬಾಹ್ಯಾಕಾಶ ಯಾನ - ಗಗನಯಾನ್ ಈ ವರ್ಷದ ಡಿಸೆಂಬರ್‌ನಲ್ಲಿ ತನ್ನ ಮೊದಲ ಪರೀಕ್ಷಾರ್ಥ ಹಾರಾಟವನ್ನು ನಡೆಸಲಿದೆ ಎಂದು ಇಸ್ರೋ ಅಧ್ಯಕ್ಷ ವಿ. ನಾರಾಯಣನ್ ಇಂದು ಹೇಳಿದ್ದಾರೆ.

ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಗನಯಾನ್ ಉತ್ತಮ ಪ್ರಗತಿಯಲ್ಲಿದೆ ಸುಮಾರು ಏಳು ಸಾವಿರದ ೭೦೦ ಪರೀಕ್ಷೆಗಳನ್ನು ಇಲ್ಲಿಯವರೆಗೆ ನಡೆಸಲಾಗಿದೆ. ಉಳಿದ ಎರಡು ಸಾವಿರದ ೩೦೦ ಪರೀಕ್ಷೆಗಳು ಮುಂದಿನ ವರ್ಷದ ಮಾರ್ಚ್ ವೇಳೆಗೆ ಪೂರ್ಣಗೊಳ್ಳಲಿವೆ ಎಂದು ಅವರು ಹೇಳಿದರು. ಇಸ್ರೋದ ಇತರ ಸಾಧನೆಗಳನ್ನು ಬಗ್ಗೆ ಹೇಳಿದ ನಾರಾಯಣನ್, ಅಮೆರಿಕದ ೬ ಸಾವಿರದ ೫೦೦ ಕಿಲೋಗ್ರಾಂಗಳಷ್ಟು ಸಂವಹನ ಉಪಗ್ರಹವನ್ನು ಭಾರತೀಯ ಲಾಂಚ್‌ಪ್ಯಾಡ್‌ನಿಂದ ಉಡಾವಣೆ ಮಾಡಲಾಗುವುದು ಎಂದು ಅವರು ತಿಳಿಸಿದರು. ಆಕ್ಸಿಯಮ್-೪ ಮಿಷನ್‌ನಲ್ಲಿ ಇಸ್ರೋ ಪಾತ್ರದ ಕುರಿತು ಮಾತನಾಡಿದ ಅವರು, ಮಿಷನ್‌ನ ಸುರಕ್ಷಿತ ಉಡಾವಣೆಯನ್ನು ಖಚಿತಪಡಿಸಿಕೊಳ್ಳುವಲ್ಲಿ ಇಸ್ರೋದ ತಾಂತ್ರಿಕ ಪರಿಣತಿಯು ನಿರ್ಣಾಯಕ ಪಾತ್ರ ವಹಿಸಿದೆ ಎಂದು ಉಲ್ಲೇಖಿಸಿದ್ದಾರೆ. ಫಾಲ್ಕನ್-೯ ರಾಕೆಟ್‌ನ ಮೊದಲ ಹಂತದಲ್ಲಿ ತೊಂದರೆಯನ್ನು ಗಮನಿಸಿದ ಇಸ್ರೋ ಅದನ್ನು ಸರಿಪಡಿಸಿ, ದುರಂತ ವೈಫಲ್ಯವನ್ನು ತಪ್ಪಿಸಿದೆ ಎಂದು ಅವರು ಹೇಳಿದರು. ನಂತರ ಮಾತನಾಡಿದ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಮತ್ತು ಗಗನಯಾತ್ರಿ ಶುಭಾಂಶು ಶುಕ್ಲಾ, ಆಕ್ಸಿಯಮ್-೪ ಮಿಷನ್ ಅನ್ನು ಸಾಧ್ಯವಾಗಿಸಿದ್ದಕ್ಕಾಗಿ ಭಾರತ ಸರ್ಕಾರ ಮತ್ತು ಇಸ್ರೋ ತಂಡಕ್ಕೆ ಧನ್ಯವಾದಗಳನ್ನು ಅರ್ಪಿಸಿದರು.

<><><><>

ದೀಪಾವಳಿ ಮತ್ತು ಛತ್ ಹಬ್ಬಗಳ ಸಂದರ್ಭದಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ೧೨ ಸಾವಿರಕ್ಕೂ ಹೆಚ್ಚು ವಿಶೇಷ ರೈಲುಗಳನ್ನು ಓಡಿಸಲು ರೈಲ್ವೆ ನಿರ್ಧರಿಸಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಇಂದು ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಕ್ಟೋಬರ್ ೧೩ ರಿಂದ ೨೬ ರವರೆಗೆ ಪ್ರಯಾಣಿಸುವವರಿಗೆ ಮತ್ತು ನವೆಂಬರ್ ೧೭ ರಿಂದ ಡಿಸೆಂಬರ್ ೧ ರವರೆಗೆ ಹಿಂದಿರುಗುವ ಪ್ರಯಾಣಿಕರಿಗೆ ರಿಟರ್ನ್ ಟಿಕೆಟ್‌ಗಳಲ್ಲಿ ಶೇಕಡಾ ೨೦ರಷ್ಟು ರಿಯಾಯಿತಿ ನೀಡಲಾಗುವುದು ಎಂದು ಘೋಷಿಸಿದರು. ಈ ಹಬ್ಬದ ಋತುವಿನಲ್ಲಿ ಈ ಉಪಕ್ರಮವನ್ನು ಜಾರಿಗೆ ತರಲಾಗುವುದು ಮತ್ತು ಇದು ಹೆಚ್ಚಿನ ಸಂಖ್ಯೆಯ ಜನರಿಗೆ ಪ್ರಯೋಜನ ನೀಡುತ್ತದೆ ಎಂದು ಅವರು ಹೇಳಿದರು. ಬಿಹಾರದ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ, ಸಂಸದ ಡಾ. ಸಂಜಯ್ ಜೈಸ್ವಾಲ್, ಕೇಂದ್ರ ಸಚಿವ ಲಾಲನ್ ಸಿಂಗ್ ಮತ್ತು ಸಂಸದ ಸಂಜಯ್ ಕುಮಾರ್ ಝಾ ಅವರೊಂದಿಗೆ ಚರ್ಚಿಸಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು. ಗಯಾದಿಂದ ದೆಹಲಿಗೆ, ಸಹರ್ಸಾದಿಂದ ಅಮೃತಸರ, ಛಪ್ರಾದಿಂದ ದೆಹಲಿಗೆ ಮತ್ತು ಮುಜಫರ್‌ಪುರದಿಂದ ಹೈದರಾಬಾದ್‌ಗೆ ನಾಲ್ಕು ಹೊಸ ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳನ್ನು ಪರಿಚಯಿಸಲಾಗುವುದು ಎಂದು ಸಚಿವರು ಮಾಹಿತಿ ನೀಡಿದರು.

<><><><>

ಆನ್‌ಲೈನ್ ಗೇಮಿಂಗ್ ಪ್ರಚಾರ ಮತ್ತು ನಿಯಂತ್ರಣ ಮಸೂದೆ, ೨೦೨೫ ಅನ್ನು ಸಂಸತ್ತು ಅಂಗೀಕರಿಸಿದ್ದು, ರಾಜ್ಯಸಭೆ ಇಂದು ಇದಕ್ಕೆ ಅನುಮೋದನೆ ನೀಡಿದೆ. ಈ ಮಸೂದೆಯು ಇ-ಸ್ಪೋರ್ಟ್ಸ್ ಮತ್ತು ಆನ್‌ಲೈನ್ ಸಾಮಾಜಿಕ ಆಟಗಳನ್ನು ಪ್ರೋತ್ಸಾಹಿಸುತ್ತದೆ ಮತ್ತು ಹಾನಿಕಾರಕ ಆನ್‌ಲೈನ್ ಹಣದ ಗೇಮಿಂಗ್ ಸೇವೆಗಳು, ಜಾಹೀರಾತುಗಳು ಮತ್ತು ಅವುಗಳಿಗೆ ಸಂಬಂಧಿಸಿದ ಹಣಕಾಸು ವಹಿವಾಟುಗಳನ್ನು ನಿಷೇಧಿಸುತ್ತದೆ. ಮಸೂದೆಯನ್ನು ಮಂಡಿಸುತ್ತಾ, ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಆನ್‌ಲೈನ್ ಹಣದ ಗೇಮಿಂಗ್ ಸಾರ್ವಜನಿಕ ಆರೋಗ್ಯಕ್ಕೆ ಅಪಾಯಕಾರಿಯಾಗಿದೆ ಎಂದು ಹೇಳಿದರು.

**ಧ್ವನಿ : ಅಶ್ವಿನಿ ವೈಷ್ಣವ್ (೩೩ ಸೆಕೆಂಡ್‌ಗಳು)**

<><><><>

ಸಂಸತ್ತಿನಲ್ಲಿ ಅಂಗೀಕರಿಸಲಾದ ಆನ್‌ಲೈನ್ ಗೇಮಿಂಗ್ ಪ್ರಚಾರ ಮತ್ತು ನಿಯಂತ್ರಣ ಮಸೂದೆಯು ಹಾನಿಕಾರಕ ಆನ್‌ಲೈನ್ ಬೆಟ್ಟಿಂಗ್ ಗೇಮಿಂಗ್ ಅಪ್ಲಿಕೇಶನ್‌ಅನ್ನು ನಿಷೇಧಿಸುತ್ತದೆ. ಇದರಿಂದಾಗಿ ಅವುಗಳ ವ್ಯಸನಕ್ಕೆ ಬಲಿಯಾಗಿರುವವರಿಗೆ ಆರ್ಥಿಕ ನಷ್ಟವನ್ನು ತಡೆಗಟ್ಟುವ ಉದ್ದೇಶ ಹೊಂದಿದೆ. ದೇಶದಲ್ಲಿ ರಿಯಲ್ ಮನಿ ಆನ್‌ಲೈನ್ ಗೇಮಿಂಗ್ ತಡೆಗೆ ಕೇಂದ್ರ ಸರ್ಕಾರ ಮುಂದಾಗಿರುವುದು ಶ್ಲಾಘನೀಯ ಎಂದು ಮೈಸೂರು ಒಡನಾಡಿ ಸಂಸ್ಥೆಯ ಕಾರ್ಯದರ್ಶಿ ಕೆ.ವಿ. ಸ್ಟ್ಯಾನ್ಲಿ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿರುವ ಅವರು, ಲಕ್ಷಾಂತರ ಯುವಕರು ಉದ್ಯೋಗವನ್ನು ಮಾಡದೆ ಹಾಗೂ ಉದ್ಯೋಗದಿಂದ ಗಳಿಸಿದ ಹಣವನ್ನು ದುರುಪಯೋಗ ಮಾಡುತ್ತಿದ್ದರು. ಕೇಂದ್ರ ಸರ್ಕಾರ ಈ ತೀರ್ಮಾನ ಕಲ್ಯಾಣ ರಾಷ್ಟ್ರದ ಉತ್ತಮ ನಡೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

**ಧ್ವನಿ : ಕೆ.ವಿ. ಸ್ಟ್ಯಾನ್ಲಿ (೧೨ ಸೆಕೆಂಡ್‌ಗಳು)**

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>